(5)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ತರಬೇತಿ ಹೊಂದಿದ ದೈಹಿಕ ಶಿಕ್ಷಣ ಶಿಕ್ಷಕರಿಗೆ ಗೌರವಧನ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1] ಸರ್ಕಾರದ ಆದೇಶ ಸಂಖ್ಯೆ:ಇಡಿ 656 ಪಿಬಿಎಸ್ 2012 ದಿ:02-01-2012

2] ಸರ್ಕಾರದ ಆದೇಶ ಸಂಖ್ಯೆ:ಇಡಿ 637 ಪಿಬಿಎಸ್ 2013 ದಿ:30-10-2014

16/3/17

ಪ್ರಸ್ತಾವನೆ:

ಮೇಲೆ ಓದಲಾದ(1)ರ ಸರ್ಕಾರದ ಆದೇಶದಲ್ಲಿ ಜಿಲ್ಲಾ ಪಂಚಾಯಿತಿ ಸ್ಥಾಯಿಸಮಿತಿಯ ವತಿಯಿಂದ ಗೌರವಧನದ ಆಧಾರದ ಮೇಲೆ ನೇಮಕಗೊಂಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ದೈಹಿಕ ಶಿಕ್ಷಣ ಶಿಕ್ಷಕರುಗಳಿಗೆ ಗೌರವಧನವನ್ನು ರೂ.1,600/- ರಿಂದ ರೂ.4,000/-ಗಳಿಗೆ ಹೆಚ್ಚಿಸಿ, ಆದೇಶಿಸಲಾಗಿತ್ತು. ಆ ನಂತರ ಮೇಲೆ ಓದಲಾದ (2)ರ ಆದೇಶದಲ್ಲಿ ಗೌರವಧನವನ್ನು ರೂ.4,000/- ರಿಂದ ರೂ.5500/-ಕ್ಕೆ ಹೆಚ್ಚಿಸಿ, ಆದೇಶಿಸಲಾಗಿದೆ. ಗೌರವಧನ ದೈಹಿಕ ಶಿಕ್ಷಣ ಶಿಕ್ಷಕರು, ವೇತನವನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿರುತ್ತಾರೆ. ಈಗಾಗಲೇ ತರಬೇತಿ ಹೊಂದದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಮತ್ತು ಇತರೆ ವರ್ಗದ 163 ಜನ ಗೌರವ ಶಿಕ್ಷಕರ ಗೌರವಧನವನ್ನು ಸಚಿವ ಸಂಪುಟದ ಉಪ ಸಮಿತಿಯ ತೀರ್ಮಾನದಂತೆ ರೂ.10,000/-ಗಳಿಗೆ ಹೆಚ್ಚಿಸಿ, ದಿನಾಂಕ:15-09-2016ರಂದು ಆದೇಶ ಹೊರಡಿಸಲಾಗಿದೆ. ಅದರಂತೆ ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

12118
16.3.17

**ಸರ್ಕಾರದ ಆದೇಶ ಸಂಖ್ಯೆ:ಇಡಿ 637 ಪಿಬಿಎಸ್ 2013, ಬೆಂಗಳೂರು**
**ದಿನಾಂಕ: 14-03-2017**

ESI-3

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ತರಬೇತಿ ಹೊಂದದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗೌರವ ಶಿಕ್ಷಕರಿಗೆ ಗೌರವ ಸಂಭಾವನೆಯನ್ನು ರೂ.5,500/- ರಿಂದ ರೂ.10,000/-ಕ್ಕೆ ಹೆಚ್ಚಿಸಿರುವಂತೆ ತರಬೇತಿ ಹೊಂದಿದ ಗೌರವಧನ ದೈಹಿಕ ಶಿಕ್ಷಣ ಶಿಕ್ಷಕರಿಗೂ ಭವಿಷ್ಯವರ್ತಿಯಾಗಿ ಜಾರಿಗೆ ಬರುವಂತೆ ಮಾಸಿಕ ಗೌರವಧನವನ್ನು ರೂ.5,500/- ರಿಂದ ರೂ.10.000/-ಕ್ಕೆ ಹೆಚ್ಚಿಸಿ, ಸರ್ಕಾರದ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 665 ವೆಚ್ಚ-8/ 2016 ದಿನಾಂಕ:20-02-2017 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

[ರೇವಯ್ಯ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ [ಪ್ರಾಥಮಿಕ]
14/3/17

ಪ್ರತಿ:-

1] ಮಹಾಲೇಖಪಾಲರು [ಆ&ಇ], ಅರಮನೆ ರಸ್ತೆ, ಬೆಂಗಳೂರು, ಕರ್ನಾಟಕ ಬೆಂಗಳೂರು,

2] ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3] ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ, ರಾಮನಗರ. .
4] ಶಾಖಾ ರಕ್ಷಾ ಕಡತ, ಹೆಚ್ಚುವರಿ ಪ್ರತಿ.

**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ : ಸಿ3(7)ಪ್ರಾ.ಶಿ.ವರ್ಗ/ಅ.ಶಿ.ಗೌ.ಹೆ/2016-17 ದಿನಾಂಕ: 25.03.2017

**ಟಿಪ್ಪಣಿ**

ಸರ್ಕಾರದ ಆದೇಶ ಸಂಖ್ಯೆ: ಇಡಿ 637 ಪಿಬಿಎಸ್ 2013 ದಿನಾಂಕ:14.03.2017ರ ಯಥಾಪ್ರತಿಯನ್ನು ರವಾಸುತ್ತಾ, ಸದರಿ ಆದೇಶದಂತೆ ಕ್ರಮ ವಹಿಸಲು ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರುಗಳ ಮುಖಾಂತರ ಸೂಕ್ತ ಕ್ರಮಕ್ಕಾಗಿ.